# ಕರ್ನಾಟಕ ವಿಧಾನ ಪರಿಷತ್ತು.

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 936 (1065) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ). |
| ಉತ್ತರಿಸಬೇಕಾದ ದಿನಾಂಕ | : | 21.09.2021 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಬಲ್ಲಹಳ್ಳಿ ಗ್ರಾಮದ ಸರ್ವೆ ನಂಬರುಗಳಲ್ಲಿ ಬಡಾವಣೆ ರಚನೆ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಎಷ್ಟು ಎಕರೆ ಭೂ ಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದೆ; (ಪೂರ್ಣ ವಿವರ ನೀಡುವುದು) | ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಬಲ್ಲಹಳ್ಳಿ ಗ್ರಾಮದ ಸರ್ವೆ ನಂಬರುಗಳಲ್ಲಿ ಬಡಾವಣೆ ನಿರ್ಮಾಣಕ್ಕಾಗಿ 381 ಎಕರೆ 01ಗುಂಟೆ ವಿಸ್ತೀರ್ಣದ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ದಿನಾಂಕ: 28.06.2016 ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಿರುತ್ತದೆ. |
| ಆ | ಸದರಿ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಅನುಸರಿಸಿರುವ ಮಾನದಂಡಗಳೇನು; (ವಿವರ ನೀಡುವುದು) | ಭೂಸ್ವಾಧೀನ ಕಾಯ್ದೆಯಲ್ಲಿನ ಮಾನದಂಡದನ್ವಯ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲಾಗಿದೆ. |
| ಇ | ಸದರಿ ಭೂಸ್ವಾಧೀನ ಪ್ರಕ್ರಿಯೆ ನಿಯಮಾವಳಿಯಂತೆ ನಿಗಧಿತ ಅವಧಿಯೊಳಗೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಈ | ಇದರಿಂದಾಗಿ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿರುವ ಭೂಮಾಲೀಕರು, ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಸದರಿ ಬಡಾವಣೆಯನ್ನು ಭೂಮಾಲೀಕರ ಸಹಭಾಗಿತ್ವದೊಂದಿಗೆ ಪರಸ್ಪರ ಜಂಟಿಯಾಗಿ ಅಭಿವೃದ್ಧಿ ಪಡಿಸಲು ಪ್ರಕ್ರಿಯೆ ಪ್ರಾರಂಭಿಸಿದ್ದು, ಭೂಮಾಲೀಕರೊಂದಿಗೆ ಸಮಾಲೋಚನೆ ನಡೆಸುತ್ತಿರುವುದರಿಂದ ಭೂಮಾಲೀಕರಿಗೆ ತೊಂದರೆಯಾಗಿರುವ ಬಗ್ಗೆ ಯಾವುದೇ ವರದಿಯಾಗಿರುವುದಿಲ್ಲ. |
| ಉ | ನಿಗಧಿತ ಸಮಯದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸದಿರಲು ಕಾರಣಗಳೇನು; (ವಿವರ ನೀಡುವುದು) | ಭೂಮಾಲೀಕರು ಪ್ರಸ್ತಾಪಿತ ಬಡಾವಣೆಯ ಅಭಿವೃದ್ಧಿಗಾಗಿ ಜಮೀನುಗಳನ್ನು ಪರಸ್ಪರ ಒಪ್ಪಂದದ ಮೂಲಕ ನೀಡಲು ಉತ್ಸುಕರಾಗಿರುವುದರಿಂದ ಭೂಮಾಲೀಕರು/ ವಾರಸುದಾರರುಗಳೊಂದಿಗೆ ಸಮಾಲೋಚನೆ ನಡೆಸಲಾಗುತ್ತಿರುವುದರಿಂದ ವಿಳಂಬವಾಗಿರುತ್ತದೆ. |

| | | |
|---|---|---|
| ಊ | ಯಾವ ಕಾಲ ಮಿತಿಯಲ್ಲಿ ಭೂ ಮಾಲೀಕರಿಗೆ ಸೂಕ್ತ ಪರಿಹಾರ ಒದಗಿಸಲಾಗುವುದು? | ಪ್ರಸ್ತಾಪಿತ ಬಡಾವಣೆಯನ್ನು ಪ್ರಾಧಿಕಾರ ಮತ್ತು ಭೂಮಾಲೀಕರ ಜಂಟಿ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ. ಪ್ರಾಧಿಕಾರವು ತನ್ನ ಸ್ವಂತ ಸಂಪನ್ಮೂಲದಿಂದ ಬಡಾವಣೆಯನ್ನು ಅಭಿವೃದ್ಧಿಪಡಿಸಿದ ನಂತರ, ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪರಿಹಾರವಾಗಿ ಭೂಮಾಲಿಕರಿಗೆ ಹಸ್ತಾಂತರಿಸುವುದರಿಂದ ಭೂಮಾಲೀಕರಿಗೆ ಲಾಭದಾಯಕವಾಗಲಿದೆ. |

ಸಂಖ್ಯೆ: ನಅಇ 359 ಮೈಅಪ್ರಾ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜು)
ನಗರಾಭಿವೃದ್ಧಿ ಸಚಿವರು